सत्यमेव जयते

ELECTION URGENT

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ


ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ.
ಬೆಂಗಳೂರು–560052 ದಿನಾಂಕ: 29-05-2018


## ರಾಜ್ಯ ಚುನಾವಣಾ ಆಯೋಗದ ತಿದ್ದುಪಡಿ ಆದೇಶ ಸಂಖ್ಯೆ: ರಾಚುಆ.33.ಇಯುಬಿ.2018, ಬೆಂಗಳೂರು, ದಿನಾಂಕ: 29–05–2018

ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.33.ಇಯುಬಿ.2018 ದಿನಾಂಕ: 23–05–2018 ರಂತೆ ಬೆಂಗಳೂರು ಮಹಾನಗರಪಾಲಿಕೆಯ ವಾರ್ಡ್ ನಂ. 121 (ಬಿನ್ನಿಪೇಟೆ ವಾರ್ಡ್) ರಲ್ಲಿ ತೆರವಾಗಿರುವ ಸದಸ್ಯ ಸ್ಥಾನಕ್ಕೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ಚುನಾವಣೆ) ನಿಯಮಗಳು, 1979 ರ ನಿಯಮ 3(1) ರಂತೆ ಆದೇಶಿಸಲಾಗಿತ್ತು.

ದಿನಾಂಕ: 17–06–2018 ರಂದು ರಂಜಾನ್ ಹಬ್ಬದ ಆಚರಣೆ ಮಾಡುವ ಸಂಭವವಿರುವ ಕಾರಣ ಈ ಕೆಳಕಂಡಂತೆ ಪರಿಷ್ಕರಿಸಿ ಚುನಾವಣಾ ವೇಳಾಪಟ್ಟಿಯನ್ನು ನಿಗದಿಪಡಿಸಿ ಆದೇಶಿಸಿದೆ.

### ಪರಿಷ್ಕೃತ ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಆಯುಕ್ತರು, ಬಿ.ಬಿ.ಎಂ.ಪಿ ರವರು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 30-05-2018 ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 06-06-2018 ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 07-06-2018 ಗುರುವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 09-06-2018 ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 18-06-2018 ಸೋಮವಾರ |
| 6 | ಮರು ಮತದಾನ ಇದ್ದಲ್ಲಿ, ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 19-06-2018 ಮಂಗಳವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 20-06-2018 ಬುಧುವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 20-06-2018 ಬುಧುವಾರ |

ಆಯುಕ್ತರು, ಬಿ.ಬಿ.ಎಂ.ಪಿ. ರವರು ಆಯೋಗವು ಆದೇಶಿಸಿರುವ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ಚುನಾವಣೆ) ನಿಯಮಗಳು, 1979 ರ ನಿಯಮ 10 ರ ಪ್ರಕಾರ ಅಧಿಸೂಚನೆಯನ್ನು ಪ್ರಪತ್ರ–1 ರಂತೆ ಹೊರಡಿಸತಕ್ಕದ್ದು. ಹಾಗೆಯೇ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಜಿಲ್ಲಾಧಿಕಾರಿಗಳ ಕಛೇರಿ, ಸಂಬಂಧಪಟ್ಟ ವಾರ್ಡ್ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು. ಅಧಿಸೂಚನೆಯ ಪ್ರತಿಯನ್ನು ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಅವರಿಗೆ ಸೂಚನೆಗಳನ್ನು ನೀಡತಕ್ಕದ್ದು. ಚುನಾವಣೆ ನಡೆಯುವ ವಿಷಯವನ್ನು ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು.

ಸದಾಚಾರ ಸಂಹಿತೆಯು ದಿನಾಂಕ: 30-05-2018 ರಿಂದ ಜಾರಿಗೆ ಬರಲಿದ್ದು ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೆ ಅಂದರೆ ದಿನಾಂಕ: 20-06-2018 ರವರೆಗೆ ಚುನಾವಣೆ ನಡೆಯುವ ಬಿ.ಬಿ.ಎಂ.ಪಿ. ವಾರ್ಡ್ 121 ರ ವ್ಯಾಪ್ತಿಯಲ್ಲಿ ಮಾತ್ರ ಜಾರಿಯಲ್ಲಿರುತ್ತದೆ. ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ಜಿಲ್ಲಾ ಚುನಾವಣಾಧಿಕಾರಿಗಳು ಕ್ರಮ ವಹಿಸುವುದು.

ಆದೇಶಾನುಸಾರ

ಅರ್ಚನ. ಎಂ.ಎಸ್.

(ಅರ್ಚನ. ಎಂ.ಎಸ್.) 29/5/2018

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಇವರಿಗೆ

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು
3. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡುವುದು.